Akashvani: Bangalore
National Bulletin in Kannada
22.12.2025 : 13.10hrs

**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

22.12.2025 : 13.10hrs

******

**ಮುಖ್ಯಾಂಶಗಳು**

1. ಮಹತ್ವಾಕಾಂಕ್ಷೆಯ ಭಾರತ-ನ್ಯೂಜಿಲೆಂಡ್ ಮುಕ್ತ ವ್ಯಾಪಾರ ಒಪ್ಪಂದ ಯಶಸ್ವಿ - ಪ್ರಧಾನಿ ನರೇಂದ್ರ ಮೋದಿ ಘೋಷಣೆ
2. ಮುಂಬೈಗೆ ಹೊರಟಿದ್ದ ಏರ್ ಇಂಡಿಯಾ ವಿಮಾನ ದೆಹಲಿಯಲ್ಲಿ ತುರ್ತು ಭೂಸ್ಪರ್ಶ
3. ಅವಾಮಿ ಲೀಗ್ ಪಕ್ಷ ನಿಷೇಧಕ್ಕೆ ಬಾಂಗ್ಲಾದೇಶ ಮಧ್ಯಂತರ ಸರ್ಕಾರ ಯತ್ನ- ಬಾಂಗ್ಲಾ ಮಾಜಿ ಪ್ರಧಾನಿ ಶೇಖ್ ಹಸೀನಾ ಆರೋಪ
4. ಥೈಲ್ಯಾಂಡ್-ಕಾಂಬೋಡಿಯಾ ಗಡಿ ಸಂಘರ್ಷ ಅಂತ್ಯಗೊಳಿಸುವ ನಿಟ್ಟಿನಲ್ಲಿ ಮಲೇಷಿಯಾದಲ್ಲಿ ಆಗ್ನೇಯಾ ಏಷ್ಯಾ ವಿದೇಶಾಂಗ ಸಚಿವರ ಸಭೆ

*******

ಭಾರತ ಮತ್ತು ನ್ಯೂಜಿಲೆಂಡ್ ನಡುವೆ ಐತಿಹಾಸಿಕ, ಮಹತ್ವಾಕಾಂಕ್ಷೆಯ ಮತ್ತು ಪರಸ್ಪರ ಪ್ರಯೋಜನಕಾರಿ ಮುಕ್ತ ವ್ಯಾಪಾರ ಒಪ್ಪಂದ ಯಾಶಸ್ವಿಯಾಗಿ ಏರ್ಪಟ್ಟಿದೆ. ಈ ಒಪ್ಪಂದದ ಕುರಿತು ಪ್ರಧಾನಿ ನರೇಂದ್ರ ಮೋದಿ, ನ್ಯೂಜಿಲೆಂಡ್ ಪ್ರಧಾನಿ ಕ್ರಿಸ್ಟೋಫರ್ ಲಕ್ಸನ್ ಇಂದು ಘೋಷಿಸಿದರು. ಪ್ರಧಾನಿ ಮೋದಿ ಅವರು, ನ್ಯೂಜಿಲೆಂಡ್ ಪ್ರಧಾನಿಯವರೊಂದಿಗೆ ದೂರವಾಣಿ ಮೂಲಕ ಸಂಭಾಷಣೆ ನಡೆಸಿದರು. ಈ ವರ್ಷದ ಮಾರ್ಚ್‌ನಲ್ಲಿ ಲಕ್ಸನ್ ಅವರ ಭಾರತ ಭೇಟಿಯ ಸಂದರ್ಭದಲ್ಲಿ ಈ ಮಾತುಕತೆಗಳನ್ನು ಪ್ರಾರಂಭಿಸಲಾಯಿತು. ೯ ತಿಂಗಳ ದಾಖಲೆಯ ಅವಧಿಯಲ್ಲಿ ಮುಕ್ತ ವ್ಯಾಪಾರ ಒಪ್ಪಂದ ಏರ್ಪಟ್ಟಿರುವುದು ಉಭಯ ದೇಶಗಳ ನಡುವಿನ ಸಂಬಂಧಗಳು ಗಟ್ಟಿಗೊಳಿಸುವ ಹಂಚಿಕೆಯ ಮಹತ್ವಾಕಾಂಕ್ಷೆ ಮತ್ತು ರಾಜಕೀಯ ಇಚ್ಛಾಶಕ್ತಿಯನ್ನು ಪ್ರತಿಬಿಂಬಿಸುತ್ತದೆ. ಈ ಒಪ್ಪಂದವು ಉಭಯ ದೇಶಗಳ ನಡುವೆ ಮಾರುಕಟ್ಟೆ ಪ್ರವೇಶವನ್ನು

ಹೆಚ್ಚಿಸುತ್ತದೆ, ಹೂಡಿಕೆ ಹರಿವನ್ನು ಉತ್ತೇಜಿಸುತ್ತದೆ ಮತ್ತು ಕಾರ್ಯತಂತ್ರದ ಸಹಕಾರವನ್ನು ಬಲಪಡಿಸುತ್ತದೆ. ಎರಡೂ ದೇಶಗಳ ನಾವೀನ್ಯಕಾರರು, ಉದ್ಯಮಿಗಳು, ರೈತರು, ವಿದ್ಯಾರ್ಥಿಗಳು ಮತ್ತು ಯುವಕರಿಗೆ ಹೊಸ ಅವಕಾಶವನ್ನು ಒದಗಿಸುತ್ತದೆ. ಈ ಒಪ್ಪಂದವು ಮುಂದಿನ ೫ ವರ್ಷಗಳಲ್ಲಿ ಎರಡೂ ದೇಶಗಳ ನಡುವಿನ ದ್ವಿಪಕ್ಷೀಯ ವ್ಯಾಪಾರವನ್ನು ದ್ವಿಗುಣಗೊಳಿಸುವ ಮತ್ತು ಮುಂದಿನ ೧೫ವರ್ಷಗಳಲ್ಲಿ ನ್ಯೂಜಿಲೆಂಡ್‌ನಿಂದ ಭಾರತದಲ್ಲಿ ೨೦ ಶತಕೋಟಿ ಡಾಲರ್ ಹೂಡಿಕೆಯ ನಿರೀಕ್ಷೆಯಿದೆ. ಇದೇ ವೇಳೆ ಉಭಯ ನಾಯಕರು, ಕ್ರೀಡೆ, ಶಿಕ್ಷಣ ಮತ್ತು ಇತರೆ ಕ್ಷೇತ್ರಗಳಲ್ಲಿ ದ್ವಿಪಕ್ಷೀಯ ಸಹಕಾರದಲ್ಲಿ ಆಗಿರುವ ಪ್ರಗತಿಯನ್ನು ಸ್ವಾಗತಿಸಿದರು. ಅಲ್ಲದೇ ಭಾರತ-ನ್ಯೂಜಿಲೆಂಡ್ ನಡುವೆ ಪಾಲುದಾರಿಕೆಯನ್ನು ಮತ್ತಷ್ಟು ಬಲಪಡಿಸುವ ತಮ್ಮ ಬದ್ಧತೆಯನ್ನು ಪುನರುಚ್ಚರಿಸಿದರು.

*******

ಮುಂಬೈಗೆ ಹೊರಟಿದ್ದ ಏರ್ ಇಂಡಿಯಾ ವಿಮಾನ ಎಐ-೮೮೭ ತಾಂತ್ರಿಕ ದೋಷದಿಂದಾಗಿ ಟೇಕ್‌ಆಫ್ ಆದ ಕೇವಲೇ ನಿಮಿಷಗಳ ನಂತರ ದೆಹಲಿ ನಿಲ್ದಾಣಕ್ಕೆ ಮರಳಿತು.ದೆಹಲಿ ಮುಂಬೈ ಏರ್ ಇಂಡಿಯಾ ವಿಮಾನದಲ್ಲಿ ಗಂಭೀರ ದೋಷ ಕಂಡುಬಂದಿದೆ ಎಂದು ವಿಮಾನದ ಪೈಲೆಟ್ ವರದಿ ಮಾಡಿದ್ದರು. ಆದ್ದರಿಂದ ಇಂದು ಬೆಳಗ್ಗೆ ೭.೪೦ಕ್ಕೆ ತುರ್ತು ಪರಿಸ್ಥಿತಿ ಘೋಷಿಸಲಾಯಿತು. ನಂತರ ಪ್ರಮಾಣಿತ ಕಾರ್ಯಾಚರಣಾ ಕಾರ್ಯ ವಿಧಾನದಂತೆ ವಿಮಾನ ತುರ್ತು ಭೂಸ್ಪರ್ಷ ಮಾಡಿತು. ಎಲ್ಲ ಪ್ರಯಾಣಿಕರು ಮತ್ತು ವಿಮಾನ ಸಿಬ್ಬಂದಿ ಸುರಕ್ಷಿತವಾಗಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಇದೇ ವೇಳೆ, ಈ ಘಟನೆಗೆ ಸಂಬಂಧಿಸಿದಂತೆ ನಾಗರಿಕ ವಿಮಾನಯಾನ ಸಚಿವಾಲಯ, ಏರ್ ಇಂಡಿಯಾದಿಂದ ವಿವರವಾದ ವರದಿಯನ್ನು ಕೇಳಿದೆ. ಈ ಪ್ರಕರಣದ ಬಗ್ಗೆ ಸಮಗ್ರ ತನಿಖೆ ನಡೆಸುವಂತೆ ನಾಗರಿಕ ವಿಮಾನಯಾನ ನಿರ್ದೇಶನಾಲಯಕ್ಕೆ ಸಚಿವಾಲಯ ನಿರ್ದೇಶನ ನೀಡಿದೆ. ಪ್ರಯಾಣಿಕರಿಗೆ ಎಲ್ಲಾ ಸಹಾಯವನ್ನು ನೀಡುವಂತೆ ಮತ್ತು ನಂತರದ ವಿಮಾನಗಳಲ್ಲಿ ಅವರಿಗೆ ಸ್ಥಳಾವಕಾಶ ಕಲ್ಪಿಸುವಂತೆಯೂ ಸಚಿವಾಲಯ, ವಿಮಾನಯಾನ ಸಂಸ್ಥೆಗೆ ಸೂಚನೆ ನೀಡಿದೆ. ಎಐ-೮೮೭ ವಿಮಾನ ಸುರಕ್ಷಿತವಾಗಿ ಇಳಿದಿದ್ದು, ಪ್ರಯಾಣಿಕರ ಸುರಕ್ಷತೆ ಅವರಿಗೆ ಮುಖ್ಯವಾಗಿದೆ ಎಂದು ಸಚಿವಾಲಯ ತಿಳಿಸಿದೆ.

*******

ರಕ್ಷಣಾ ಮತ್ತು ಆಂತರಿಕ ಭದ್ರತೆಗಾಗಿ ಸಂಶೋಧನೆ, ಶಿಕ್ಷಣ, ತರಬೇತಿ ಮತ್ತು ತಂತ್ರಜ್ಞಾನ ಬೆಂಬಲ ಕ್ಷೇತ್ರಗಳಲ್ಲಿ ಸಹಯೋಗವನ್ನು ಮುಂದುವರಿಸುವ ಒಪ್ಪಂದಕ್ಕೆ ರಕ್ಷಣಾ ಸಂಶೋಧನೆ ಮತ್ತು ಅಭಿವೃದ್ಧಿ ಸಂಸ್ಥೆ ಹಾಗೂ ರಾಷ್ಟ್ರೀಯ ರಕ್ಷಾ ವಿಶ್ವವಿದ್ಯಾಲಯ ಸಹಿ ಹಾಕಿವೆ. ನವದೆಹಲಿಯಲ್ಲಿ ಇಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರ ಸಮ್ಮುಖದಲ್ಲಿ ವಿಜ್ಞಾನಿ ಮತ್ತು ಮಹಾನಿರ್ದೇಶಕಿ ಡಾ. ಚಂದ್ರಿಕಾ ಕೌಶಿಕ್ ಮತ್ತು ಆರ್‌ಆರ್‌ಯು ಉಪಕುಲಪತಿ ಪ್ರೊಫೆಸರ್ ಡಾ. ಬಿಮಲ್ ಎನ್. ಪಟೇಲ್ ತಿಳುವಳಿಕೆ ಒಪ್ಪಂದಕ್ಕೆ ಸಹಿ ಹಾಕಿದರು. ಅಮೃತ್ ಕಾಲದ ಸಮಯದಲ್ಲಿ ಆತ್ಮನಿರ್ಭರ ಭಾರತದ ರಾಷ್ಟ್ರೀಯ ದೃಷ್ಟಿಕೋನ ಮತ್ತು ಇಡೀ ರಾಷ್ಟ್ರದ ವಿಧಾನಕ್ಕೆ ಅನುಗುಣವಾಗಿ, ರಕ್ಷಣೆ ಮತ್ತು ಆಂತರಿಕ ಭದ್ರತಾ ತಂತ್ರಜ್ಞಾನಗಳಲ್ಲಿ ದೇಶದ ಸ್ವಾವಲಂಬನೆಯನ್ನು ಬಲಪಡಿಸುವ ಉದ್ದೇಶವನ್ನು ಈ ಒಪ್ಪಂದ ಹೊಂದಿದೆ. ರಾಷ್ಟ್ರೀಯ ಭದ್ರತಾ ಸನ್ನದ್ಧತೆಯನ್ನು ಹೆಚ್ಚಿಸಲು ಮತ್ತು ಆಂತರಿಕ ಭದ್ರತೆಯಲ್ಲಿ ಭಾರತದ ಕಾರ್ಯತಂತ್ರದ ಸ್ವಾಯತ್ತತೆಯನ್ನು ಬಲಪಡಿಸಲು ತಂತ್ರಜ್ಞಾನ, ಜ್ಞಾನ ಮತ್ತು ಕಾರ್ಯಾಚರಣೆಯ ಒಳನೋಟವನ್ನು ಸಂಯೋಜಿಸುವ ಹಂಚಿಕೆಯ ಬದ್ಧತೆಯನ್ನು ಇದು ಪ್ರತಿಬಿಂಬಿಸುತ್ತದೆ.

*******

ಇಂದು ರಾಷ್ಟ್ರೀಯ ಗಣಿತ ದಿನ. ಭಾರತದಲ್ಲಿ ಪ್ರತಿ ವರ್ಷ ಡಿಸೆಂಬರ್ ೨೨ ರಂದು ಶ್ರೇಷ್ಠ ಗಣಿತತಜ್ಞ - ಶ್ರೀನಿವಾಸ ರಾಮಾನುಜನ್ ಅವರ ಜನ್ಮ ದಿನದಂದು ರಾಷ್ಟ್ರೀಯ ಗಣಿತ ದಿನವನ್ನು ಆಚರಿಸಲಾಗುತ್ತದೆ. ಗಣಿತದ ಮಹತ್ವದ ಬಗ್ಗೆ ಜಾಗೃತಿ ಮೂಡಿಸುವುದು ಮತ್ತು ಯುವಜನರಲ್ಲಿ ಗಣಿತದ ಬಗ್ಗೆ ಆಸಕ್ತಿ ಬೆಳೆಸುವುದು ಇದರ ಮುಖ್ಯ ಉದ್ದೇಶವಾಗಿದೆ. ಧಾರವಾಡದ ಪ್ರಾದೇಶಿಕ ವಿಜ್ಞಾನ ಕೇಂದ್ರವು, ರಾಷ್ಟ್ರೀಯ ಗಣಿತ ದಿನಾಚರಣೆ ಅಂಗವಾಗಿ, ಧಾರವಾಡದ ಪ್ರಾದೇಶಿಕ ವಿಜ್ಞಾನ ಕೇಂದ್ರದಲ್ಲಿ ಇಂದು ಮಧ್ಯಾಹ್ನ ೧ ಗಂಟೆಗೆ ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಗಣಿತ ರಸಪ್ರಶ್ನೆ ಸ್ಪರ್ಧೆ ಹಾಗೂ ಉಪನ್ಯಾಸ ಕಾರ್ಯಕ್ರಮ ಆಯೋಜಿಸಿದೆ.

*******

ಬಾಂಗ್ಲಾದೇಶ ಚುನಾವಣೆಯಲ್ಲಿ ತಮ್ಮ ಪಕ್ಷ ಅವಾಮಿ ಲೀಗ್ ಇಲ್ಲದೇ ನಡೆಯುವ ಚುನಾವಣೆಯು ಚುನಾವಣೆಯಲ್ಲ, ಬದಲಾಗಿ ಅದು ಪಟ್ಟಾಭಿಷೇಕವಾಗುತ್ತದೆ ಎಂದು ಬಾಂಗ್ಲಾದೇಶದ ಮಾಜಿ

ಪ್ರಧಾನಿ ಶೇಖ್ ಹಸೀನಾ ಹೇಳಿದ್ದಾರೆ. ಮುಂದಿನ ವರ್ಷ ಫೆಬ್ರವರಿಯಲ್ಲಿ ಬಾಂಗ್ಲಾದೇಶ ತನ್ನ ರಾಷ್ಟ್ರೀಯ ಚುನಾವಣೆಯನ್ನು ನಡೆಸಲು ಸಿದ್ಧತೆ ನಡೆಸುತ್ತಿದೆ ಮತ್ತು ಅವಾಮಿ ಲೀಗ್ ಮುಂಬರುವ ಚುನಾವಣೆಯಲ್ಲಿ ಸ್ಪರ್ಧಿಸುವುದನ್ನು ನಿಷೇಧಿಸಲಾಗಿದೆ. ಸುದ್ದಿ ಸಂಸ್ಥೆಗೆ ನೀಡಿದ ಸಂದರ್ಶನದಲ್ಲಿ ಮಾತನಾಡಿದ ಶೇಖ್ ಹಸೀನಾ, ಬಾಂಗ್ಲಾದೇಶಿ ಜನರಿಂದ ಒಂದೇ ಒಂದು ಮತವಿಲ್ಲದೆ ಮುಹಮ್ಮದ್ ಯೂನಸ್ ಆಡಳಿತ ನಡೆಸುತ್ತಿದ್ದಾರೆ. ಈಗ ಅವರು ಒಂಬತ್ತು ಬಾರಿ ಜನರ ಆದೇಶದಿಂದ ಆಯ್ಕೆಯಾದ ಪಕ್ಷವನ್ನು ನಿಷೇಧಿಸಲು ಪ್ರಯತ್ನಿಸುತ್ತಿದ್ದಾರೆ ಎಂದು ಆರೋಪಿಸಿದ್ದಾರೆ. ಉಸ್ಮಾನ್ ಹಾದಿ ಅವರ ಹತ್ಯೆಯು ಪ್ರಸ್ತುತ ಆಡಳಿತದಲ್ಲಿ ಹದಗೆಟ್ಟಿರುವ ಕಾನೂನು-ಸುವ್ಯವಸ್ಥೆಯನ್ನು ಪ್ರತಿಬಿಂಬಿಸುತ್ತದೆ ಎಂದು ಅವರು ದೂರಿದರು.

*******

ಇಂಕಿಲಾಬ್ ಮಂಚ್ ವಕ್ತಾರ ಷರೀಫ್ ಉಸ್ಮಾನ್ ಬಿನ್ ಹಾದಿ ಹತ್ಯೆಯ ಪ್ರಮುಖ ಶಂಕಿತ ಆರೋಪಿ ಫೈಸಲ್ ಕರೀಂ ಮಸೂದ್ ಬಾಂಗ್ಲಾದೇಶ ತೊರೆದಿದ್ದಾನೆ ಎಂಬುದಕ್ಕೆ ಯಾವುದೇ ನಿರ್ದಿಷ್ಟ ಮಾಹಿತಿ ಇಲ್ಲ ಎಂದು ಸ್ಥಳೀಯ ಪೊಲೀಸರು ತಿಳಿಸಿದ್ದಾರೆ.ಈ ಕುರಿತು ಮಾಹಿತಿ ನೀಡಿದ ಬಾಂಗ್ಲಾದೇಶ ಹೆಚ್ಚುವರಿ ಪೊಲೀಸ್ ಮಹಾ ನಿರ್ದೇಶಕ ಖಂಡೇಕರ್ ರಫೀಕುಲ್ ಇಸ್ಲಾಂ, ಕಾನೂನು ಜಾರಿ ಸಂಸ್ಥೆಗಳು ಮತ್ತು ಗುಪ್ತಚರ ಸಂಸ್ಥೆಗಳು ಫೈಸಲ್ ಇರುವ ಸ್ಥಳವನ್ನು ಪತ್ತೆಹಚ್ಚಲು ಸಕ್ರಿಯವಾಗಿ ಪ್ರಯತ್ನಿಸುತ್ತಿವೆ. ಕೊಲೆಗೆ ಯಾವುದೇ ರಾಜಕೀಯ ಪಕ್ಷದ ಹಸ್ತಕ್ಷೇಪವಿದೆ ಎಂಬುದಕ್ಕೆ ಯಾವುದೇ ನಿರ್ದಿಷ್ಟ ಪುರಾವೆಗಳು ಇಲ್ಲ ಎಂದು ಹೇಳಿದರು. ಇದೇ ೧೮ ರಂದು ಧರ್ಮನಿಂದನೆಯ ಆರೋಪದ ಮೇಲೆ ಮೈಮೇನ್ಸಿಂಗ್ಸ್‌ನಲ್ಲಿ ಗಾರ್ಮೆಂಟ್ಸ್ ಕೆಲಸಗಾರನಾಗಿದ್ದ ಹಿಂದೂ ಸಮುದಾಯದ ದೀಪುಚಂದ್ರದಾಸ ಅವರನ್ನು ಥಳಿಸಿ ಹತ್ಯೆ ಮಾಡಲಾಗಿತ್ತು. ನಂತರ ಅವರ ದೇಹವನ್ನು ಮರಕ್ಕೆ ಕಟ್ಟಿ ಬೆಂಕಿ ಹಚ್ಚಲಾಗಿತ್ತು. ಆದರೆ ಮೃತ ದೀಪುಚಂದ್ರದಾಸ್ ಧರ್ಮದ ಕುರಿತು ಅವಹೇಳನಕಾರಿ ಹೇಳಿಕೆ ನೀಡಿರುವುದಕ್ಕೆ ಯಾವುದೇ ಪುರಾವೆ ಕಂಡುಬಂದಿಲ್ಲ ಎಂದು ಬಾಂಗ್ಲಾದೇಶದ ತುರ್ತು ಪ್ರಕ್ರಿಯೆ ಪಡೆ ತಿಳಿಸಿದೆ. ಈ ಘಟನೆಯ ನಂತರ ಲಕ್ಷ್ಮೀಪುರದಲ್ಲಿ ನಡೆದ ಹಿಂಸಾಚಾರದಲ್ಲಿ ಕಿಡಿಗೇಡಿಗಳು ಏಳು ವರ್ಷದ ಬಾಲಕಿಯನ್ನು ಜೀವಂತವಾಗಿ ದಹಿಸಿದ್ದರು.

*******

ಥೈಲ್ಯಾಂಡ್ ಮತ್ತು ಕಾಂಬೋಡಿಯಾ ನಡುವಿನ ಗಡಿ ಸಂಘರ್ಷವನ್ನು ಸ್ಥಗಿತಗೊಳಿಸಲು ಮಲೇಷಿಯಾದಲ್ಲಿ ಆಗ್ನೇಯಾ ಏಷ್ಯಾದ ವಿದೇಶಾಂಗ ಸಚಿವರು ಸಭೆ ಸೇರಲಿದ್ದಾರೆ. ಸಂಘರ್ಷದಲ್ಲಿ ಈ ತಿಂಗಳು ೪೦ ಜನರು ಮೃತಪಟ್ಟಿದ್ದು, ೫ ಲಕ್ಷಕ್ಕೂ ಹೆಚ್ಚು ಜನರನ್ನು ಸ್ಥಳಾಂತರಿಸಲಾಗಿದೆ. ಡಿಸೆಂಬರ್ ೮ ರಂದು ಸಂಘರ್ಷ ಪ್ರಾರಂಭವಾದ ನಂತರ ಥೈಲ್ಯಾಂಡ್ ಮತ್ತು ಕಾಂಬೋಡಿಯಾ ನಡುವೆ ನಡೆಯುತ್ತಿರುವ ಮೊದಲ ನೇರ ಮಾತುಕತೆ ಇದಾಗಿದೆ. ಮಲೇಷಿಯಾ ನೇತೃತ್ವದಲ್ಲಿ ಮತ್ತು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಬೆಂಬಲದೊಂದಿಗೆ ಈ ಹಿಂದೆ ನಡೆದ ಮಾತುಕತೆ ವಿಫಲವಾಗಿತ್ತು. ಉಭಯ ದೇಶಗಳು ಕದನ ವಿರಾಮ ಘೋಷಿಸುವುದು ಕೌಲಾಲಂಪುರದಲ್ಲಿ ನಡೆಯುವ ಈ ಸಭೆಯ ಪ್ರಮುಖ ಗುರಿಯಾಗಿದೆ. ೧೧ನೇ ಶತಮಾನದ ಪ್ರೀಹ್ ವಿಹಾರ್ ದೇವಾಲಯದ ಕುರಿತು ಎರಡು ದೇಶಗಳ ನಡುವೆ ಶತಮಾನಗಳಷ್ಟು ಹಳೆಯದಾದ ವಿವಾದವೇ ಈಗಿನ ಸಂಘರ್ಷಕ್ಕೂ ಕಾರಣವಾಗಿದೆ. ಈ ದೇವಾಲಯವು ಯುನೆಸ್ಕೋ ವಿಶ್ವಪರಂಪರೆಯ ತಾಣವಾಗಿದೆ. ೧೯೬೨ರಲ್ಲಿ ಅಂತಾರಾಷ್ಟ್ರೀಯ ನ್ಯಾಯಾಲಯವು ಕಾಂಬೋಡಿಯಾಗೆ ಈ ದೇವಾಲಯ ಸೇರಿದ್ದು, ಎಂದು ತೀರ್ಪು ನೀಡಿದ್ದರೂ ಸುತ್ತಮುತ್ತಲಿನ ಭೂಮಿ ವಿವಾದಕ್ಕೆ ಕಾರಣವಾಗಿದೆ. ಇದು ದಶಕಗಳ ಕಾಲ ಎರಡೂ ದೇಶಗಳ ನಡುವೆ ಮಿಲಿಟರಿ ಘರ್ಷಣೆಗೆ ಕಾರಣವಾಗಿದೆ.

*******

ಮಾಜಿ ಟಿಎಂಸಿ ನಾಯಕ ಶೇಖ್ ಸಹಜಹಾನ್ ಭ್ರಷ್ಟಾಚಾರ ಪ್ರಕರಣದ ಪ್ರಮುಖ ಸಾಕ್ಷಿಗಳಲ್ಲಿ ಒಬ್ಬರಾದ ಭೋಲನಾಥ್ ಘೋಷ್ ಅವರ ಕೊಲೆ ಯತ್ನ ಪ್ರಕರಣದ ಪ್ರಮುಖ ಆರೋಪಿ ಅಲಿಮ್ ಮೊಲ್ಲಾನನ್ನು ನಿನ್ನೆ ರಾತ್ರಿ ಪೊಲೀಸರು ಬಂಧಿಸಿದ್ದಾರೆ. ಆರೋಪಿಯನ್ನು ಇಂದು ಬಸಿರ್ಹತ್ ನ್ಯಾಯಾಲಯಕ್ಕೆ ಹಾಜರುಪಡಿಸಲಾಗುವುದು ಎಂದು ಪೊಲೀಸರು ತಿಳಿಸಿದ್ದಾರೆ. ಡಿಸೆಂಬರ್ ೧೦ ರಂದು ಉತ್ತರ ೨೪ ಪರಗಣ ಜಿಲ್ಲೆಯಲ್ಲಿ ಭೋಲಾನಾಥ್ ಘೋಷ್ ಅವರ ಕಾರಿಗೆ ಟ್ರಕ್ ಡಿಕ್ಕಿ ಹೊಡೆದ ಪರಿಣಾಮ ಅವರು ತೀವ್ರವಾಗಿ ಗಾಯಗೊಂಡರು. ಅವರ ಕಿರಿಯ ಮಗ ಮತ್ತು ಅವರ ಕಾರಿನ ಚಾಲಕ ಸಾವನ್ನಪ್ಪಿದರು. ಶೇಖ್ ಶಹಜಹಾನ್ ಅವರಿಗೆ ಸಂಬಂಧಿಸಿದ ಪ್ರಕರಣವೊಂದರಲ್ಲಿ ಬಸಿರ್ಹತ್ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಲು ಅವರು ಹೋಗುತ್ತಿದ್ದರು.

ಭೋಲನಾಥ್ ಅವರ ಕುಟುಂಬವು ಈ ಅಪಘಾತವನ್ನು ಉದ್ದೇಶಪೂರ್ವಕವಾಗಿ ಮಾಡಲಾಗಿದೆ ಮತ್ತು ಕೊಲೆ ಯತ್ನದ ಪ್ರಕರಣ ಎಂದು ಆರೋಪಿಸಿತ್ತು.

*******

ದೆಹಲಿ ಮತ್ತು ಎನ್‌ಸಿಆರ್ ಪ್ರದೇಶದಲ್ಲಿ ಇಂದು ದಟ್ಟವಾದ ಮಂಜಿನ ಕಾರಣದಿಂದ ಹಲವಾರು ವಿಮಾನಗಳು ಮತ್ತು ರೈಲುಗಳ ಸಂಚಾರದಲ್ಲಿ ವ್ಯತ್ಯಯ ಉಂಟಾಗಿದೆ. ಇಂದಿರಾಗಾಂಧಿ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಕಡಿಮೆ ಗೋಚರತೆಯ ಕಾರಣ ೧೦ ವಿಮಾನಗಳನ್ನು ರದ್ದುಗೊಳಿಸಲಾಗಿದೆ ಎಂದು ದೆಹಲಿ ವಿಮಾನ ನಿಲ್ದಾಣದ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

****END***